# ಕೌಶಲ್ಯಾಧಾರಿತ ಕೋರ್ಸ್‌ಗಳ ಮಾಹಿತಿ

■ **ವಿಕಸುದ್ದಿಲೋಕ** ಕಾರ್ಕಳ

ಸ್ಥಳೀಯ ಎಂ.ಪಿ.ಎಂ. ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕಾಲೇಜಿನ ಉದ್ಯೋಗ ಮಾಹಿತಿ ಮತ್ತು ಪ್ಲೇಸ್ ಮೆಂಟ್ ಘಟಕದ ವತಿಯಿಂದ ಅಂತಿಮ ಪದವಿ ವಿದ್ಯಾರ್ಥಿಗಳಿಗೆ ವಿವಿಧ ಕೌಶಲ್ಯಾಧರಿತ ಕೋರ್ಸ್‌ಗಳ ಬಗ್ಗೆ ಮಾಹಿತಿ ಕಾರ್ಯಾಗಾರ ನಡೆಯಿತು.

ಉಡುಪಿಯ ಡ್ರೀಮ್‌ಝೋನ್ ಇನ್ ಸ್ಟಿಟ್ಯೂಟ್‌ನ ಕೇಂದ್ರ ಮುಖ್ಯಸ್ಥ ವಿನೋದ್ ಕುಮಾರ್ ಮಾತನಾಡಿ, ಬದಲಾಗುತ್ತಿರುವ ಜೀವನಕ್ರಮದಲ್ಲಿ ಉದ್ಯೋಗ ಕ್ಷೇತ್ರದಲ್ಲಿನ ನಿರೀಕ್ಷೆಗಳು ಬದಲಾಗುತ್ತಿವೆ. ಆದ್ದರಿಂದ ಅಭ್ಯರ್ಥಿಗಳು ಅಪೇಕ್ಷಿತ ಕೌಶಲ್ಯಗಳಲ್ಲಿ ಪರಿಣತಿ ಸಾಧಿಸಬೇಕು ಎಂದರು.

ಸಂಸ್ಥೆಯ ತರಬೇತುರರಾದ ಅನುಶ್ರೀ ಹಾಗೂ ರಶ್ಮಿತ ಫ್ಯಾಬ್ರಿಕ್ ಪೇಂಟಿಂಗ್, ಜ್ಯುವೆಲ್ಲರಿ ಡಿಸೈನಿಂಗ್ ಬಗ್ಗೆ ಪ್ರಾತ್ಯಕ್ಷಿಕೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಿನ್ಸಿಪಾಲ್ ಪ್ರೊ. ಶ್ರೀವರ್ಮ ಅಜ್ರಿ ಮಾತನಾಡಿ ಇಂದಿನ ವಿದ್ಯಾರ್ಥಿಗಳು ವಿದ್ಯಾಭ್ಯಾಸಕ್ಕೆ ಪೂರಕವಾದ ಕೌಶಲ್ಯಗಳನ್ನು ರೂಡಿಸಿಕೊಂಡಾಗ ಮಾತ್ರ ಉದ್ಯೋಗ ಮಾರುಕಟ್ಟೆಯಲ್ಲಿನ ಅವಕಾಶಗಳನ್ನು ಬಾಚಿಕೊಳ್ಳಬಹುದು ಎಂದರು.

ವಾಣಿಜ್ಯ ವಿಭಾಗದ ಮುಖ್ಯಸ್ಥೆ ಜ್ಯೋತಿ ಜನ್ನೆ ಹಾಗೂ ಡ್ರೀಮ್‌ಝೋನ್ ಇನ್‌ಸಿಟ್ಯೂಟ್‌ನ ಬಸವರಾಜ್ ಪಾಟೀಲ್ ಉಪಸ್ಥಿತರಿದ್ದರು.

ಕಾಲೇಜಿನ ಪ್ಲೇಸ್‌ಮೆಂಟ್ ವಿಭಾಗದ ಸಂಚಾಲಕಿ ಸುಶ್ಮಾರಾವ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಂತಿಮ ಪದವಿ ವಿದ್ಯಾರ್ಥಿನಿ ಶ್ವೇತಾ ಕಾರ್ಯಕ್ರಮ ನಿರೂಪಿಸಿ, ಸ್ವಾತಿಕುಮಾರಿ ವಂದಿಸಿದರು.